ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1084 |
| 2) | ಮಾನ್ಯ ಪರಿಷತ್ ಸದಸ್ಯರ ಹೆಸರು | ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಶಿಕ್ಷಕರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 17.03.2025 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯದ ಗ್ರಾಮೀಣ ಭಾಗದ ಮಹಿಳೆಯರು, ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ ನೀಡುವ ನಿಟ್ಟಿನಲ್ಲಿ ಉದ್ಯೋಗ ಕ್ಷೇತ್ರದ ಬೇಡಿಕೆಗಳಿಗೆ ತಕ್ಕಂತೆ ಅಗತ್ಯ ಕೌಶಲ್ಯಗಳನ್ನು ರೂಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | **<u>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ – ( ಕೆ.ಎಸ್.ಡಿ.ಸಿ.)</u>**<br>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ರಾಜ್ಯಾದ್ಯಂತ ಈಗಾಗಲೇ ಜಾರಿಗೊಳಿಸಲಾದ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ಗ್ರಾಮೀಣ ಭಾಗದ ಮಹಿಳೆಯರನ್ನು ಒಳಗೊಂಡಂತೆ ಉಚಿತ ಕೌಶಲ್ಯಾಧಾರಿತ ತರಬೇತಿಯನ್ನು ಉದ್ಯೋಗ ಕ್ಷೇತ್ರದ ಬೇಡಿಕೆಗೆ ತಕ್ಕಂತೆ ಅಗತ್ಯ ಕೌಶಲ್ಯಗಳನ್ನು ರೂಪಿಸಲು CMKKY- ILC & Future Skills ತರಬೇತಿ ನೀಡಲಾಗುತ್ತಿದೆ ಹಾಗೂ ರಾಜ್ಯದ 150 ಎನ್.ಎಸ್.ಕ್ಯೂ.ಎಫ್ ಶಾಲೆಗಳಲ್ಲಿ ನನ್ನ ವೃತ್ತಿ ನನ್ನ ಆಯ್ಕೆ – Karnataka Carrer Planning Program –ನಡಿ ವೃತ್ತಿ ಮಾರ್ಗದರ್ಶನ ಕಾರ್ಯಕ್ರಮವನ್ನು ವಿದ್ಯಾರ್ಥಿಗಳಿಗೆ ಈಗಾಗಲೇ ಕೈಗೊಳ್ಳಲಾಗಿರುತ್ತದೆ.<br><br>**<u>ರಾಷ್ಟ್ರೀಯ ಜೀವನೋಪಾಯ ಅಭಿಯಾನ</u>**<br>**<u>ಸಂಜೀವಿನಿ- ಕೆ ಎಸ್ ಆರ್ ಎಲ್ ಪಿ ಎಸ್ ಸಂಸ್ಥೆ / ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (DAY-NRLM)</u>**<br>• ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ-ಕೆ.ಎಸ್.ಆರ್.ಎಲ್.ಪಿ.ಎಸ್. ಸಂಸ್ಥೆಯ ಮೂಲಕ ಅನುಷ್ಠಾನಗೊಳಿಸಲಾಗುತ್ತಿರುವ ಕಾರ್ಯಕ್ರಮ ಗಳಡಿ ಮಹಿಳೆಯರಿಗೆ ವಿವಿಧ ಕೌಶಲ್ಯ ತರಬೇತಿಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗಿದೆ.<br>• ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ ಸ್ವಸಹಾಯ ಗುಂಪಿನ ಮಹಿಳೆಯರಿಗೆ ಅವರು ಉತ್ಪಾದಿಸುವ ಉತ್ಪನ್ನಗಳ ಮೌಲ್ಯವರ್ಧನೆ, FSSAI ಉದ್ಯಮ, ಆಧಾರ್, ಜಿಎಸ್‌ಟಿ ಹಾಗೂ ಸ್ಥಳೀಯ ನೋಂದಣಿ, ಉತ್ತಮ ಪ್ಯಾಕಿಂಗ್, ಬ್ರ್ಯಾಂಡಿಂಗ್ ಸೇರಿದಂತೆ, ವ್ಯವಹಾರ ಅಭಿವೃದ್ಧಿ ಯೋಜನೆ ಮತ್ತು ಮಾರುಕಟ್ಟೆ ಕೌಶಲ್ಯ ಮುಂತಾದ ತರಬೇತಿಗಳನ್ನು ಅಭಿಯಾನದ ಮತ್ತು ತಾಂತ್ರಿಕ ಬೆಂಬಲ ಸಂಸ್ಥೆಗಳ ಮೂಲಕ ನಿರಂತರವಾಗಿ ಆಯೋಜಿಸಿ ಅಗತ್ಯ ಕೌಶಲ್ಯ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗಿರುತ್ತದೆ.<br>• ಸಂಸ್ಥೆಯು ಅನುಷ್ಠಾನಗೊಳಿಸುತ್ತಿರುವ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ (DDU-GKY) ಅಡಿ ಗ್ರಾಮೀಣ ಭಾಗದ ಮಹಿಳೆಯರು ಅಥವಾ ಅವರ ಕುಟುಂಬದ ಯುವಕ/ಯುವತಿಯರಿಗೆ ತರಬೇತಿ ಒದಗಿಸಿ |

| | |
|---|---|
| | ವೇತನಾಧಾರಿತ ಉದ್ಯೋಗವನ್ನು ಕಲ್ಪಿಸಲಾಗುತ್ತಿದೆ.<br>• ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಕೇಂದ್ರ ಯೋಜನೆ (RSETI) ಕಾರ್ಯಕ್ರಮಗಳಡಿ ಸ್ವಸಹಾಯ ಗುಂಪಿನ ಮಹಿಳೆಯರು ಅಥವಾ ಅವರ ಕುಟುಂಬದ ಸದಸ್ಯರಿಗೆ ತರಬೇತಿ ಒದಗಿಸಿ ಸ್ವಯಂ ಉದ್ಯೋಗವನ್ನು ಕೈಗೊಳ್ಳಲು ಬ್ಯಾಂಕ್ ಲಿಂಕೇಜ್ ಸೌಲಭ್ಯ ಪಡೆಯಲು ಬೆಂಬಲಿಸಲಾಗುತ್ತಿದೆ. |
| (ಆ) ಸ್ಕಿಲ್ ಲೋಕಲ್, ವರ್ಕ್ ಗ್ಲೋಬಲ್ ಎನ್ನುವ ರಾಜ್ಯದ ಸರ್ಕಾರದ ಸೂತ್ರ ಕಾರ್ಯಗತಗೊಂಡಿದೆಯೇ; | ಅನ್ವಯಿಸುವುದಿಲ್ಲ |
| (ಇ) ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಆಗಿರುವ ಪ್ರಗತಿಗಳೇನು? | ಅನ್ವಯಿಸುವುದಿಲ್ಲ |

ಸಂಖ್ಯೆ: ಕೌಉಜೀಇ 14 ಉಜೀಪ್ರ 2025

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.